DFA/887651

ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 22 |
| 2 | ಮಾನ್ಯ ಸದಸ್ಯರ ಹೆಸರು | ಶ್ರೀ ಬಿ. ಜಿ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸಬೇಕಾದ ದಿನಾಂಕ | 12/09/2022 |
| 4 | ಉತ್ತರಿಸಬೇಕಾದ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಆಸ್ಪತ್ರೆಗಳ ಸಂಖ್ಯೆ ಎಷ್ಟು: (ವಿವರ ನೀಡುವುದು) | ಕಲಬುರಗಿ ಜಿಲ್ಲೆಯಲ್ಲಿ ಈ ಕೆಳಕಂಡ 06 ಆಸ್ಪತ್ರೆಗಳು ವೈದ್ಯಕೀಯ ಶಿಕ್ಷಣ ಇಲಾಖೆಯಡಿಯಲ್ಲಿ ಕಾರ್ಯ ನಿರ್ವಹಿಸುತ್ತಿವೆ.<br>1. ಗುಲ್ಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ.<br>2. ತಾಯಿ ಮತ್ತು ಮಕ್ಕಳ ಆಸ್ಪತ್ರೆ (ಜಿಲ್ಲಾ ಆಸ್ಪತ್ರೆ)<br>3. ಟ್ರಾಮಾ ಕೇರ್ ಆಸ್ಪತ್ರೆ.<br>4. ಎಸ್‌ಎನ್‌ಸಿಯು ಆಸ್ಪತ್ರೆ, ಕಲಬುರಗಿ.<br>5. ಜಯದೇವ ಹೃದ್ರೋಗ ಆಸ್ಪತ್ರೆ.<br>6. ಕಿದ್ವಾಯಿ ಆಸ್ಪತ್ರೆ.<br>ಯಾದಗಿರಿ ಜಿಲ್ಲೆಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿಯ ಜಿಲ್ಲಾ ಆಸ್ಪತ್ರೆಯನ್ನು ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ ಯಾದಗಿರಿ ವೈದ್ಯಕೀಯ ಮಹಾವಿದ್ಯಾಲಯಕ್ಕೆ ವರ್ಗಾಯಿಸಲಾಗಿದೆ. |
| ಆ) | ಈ ಮೇಲ್ಕಂಡ ಜಿಲ್ಲೆಗಳಲ್ಲಿರುವ ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಸರ್ಕಾರ ಇದುವರವಿಗೂ ಕೈಗೊಂಡ ಕ್ರಮಗಳೇನು: (ವಿವರ ನೀಡುವುದು) | ಬಂದಿದೆ.<br>ಸದರಿ ಆಸ್ಪತ್ರೆಗಳಿಗೆ NMC ನಿಯಮಾವಳಿಗಳನ್ವಯ ಅವಶ್ಯವಿರುವ ಹುದ್ದೆಗಳನ್ನು ಸೃಜನೆ ಮಾಡಲು ಕ್ರಮ ವಹಿಸಲಾಗುತ್ತಿದೆ. ಲಭ್ಯವಿರುವ ಸಿಬ್ಬಂದಿಗಳಿಂದಲೇ ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗದಂತೆ ಚಿಕಿತ್ಸೆ ನೀಡಲಾಗುತ್ತಿದೆ. |
| ಇ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ಆಸ್ಪತ್ರೆಗಳಿಗೆ ಸ್ವಂತ ಕಟ್ಟಡ ಅಥವಾ ದುರಸ್ತಿಗಾಗಿ ಕಳೆದ ಮೂರು ವರ್ಷಗಳಲ್ಲಿ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು? (ವಿವರ ನೀಡುವುದು) | ಕಲಬುರಗಿ ಜಿಲ್ಲೆಯಲ್ಲಿನ ಆಸ್ಪತ್ರೆಗಳು ಸ್ವಂತ ಕಟ್ಟಡವನ್ನು ಹೊಂದಿರುತ್ತವೆ.<br>ಜಯದೇವ ಹೃದ್ರೋಗ ಆಸ್ಪತ್ರೆಗೆ ಸಂಬಂಧಿಸಿದಂತೆ, 2019-20 ನೇ ಸಾಲಿನಲ್ಲಿ ರೂ. 37,37,08,500/- ಗಳು ಮತ್ತು 2021-22 ನೇ ಸಾಲಿನಲ್ಲಿ ರೂ. 62,63,00,000/- ಗಳ ಅನುದಾನವನ್ನು ನೂತನ ಕಟ್ಟಡ ನಿರ್ಮಾಣಕ್ಕಾಗಿ ಒದಗಿಸಲಾಗಿದೆ.<br>ಯಾದಗಿರಿ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು ಪ್ರಾರಂಭವಾಗದೇ ಇರುವುದರಿಂದ ಸದರಿ ಜಿಲ್ಲಾ ಆಸ್ಪತ್ರೆಗೆ ವೈದ್ಯಕೀಯ ಶಿಕ್ಷಣ ಇಲಾಖೆಯಿಂದ ಯಾವುದೇ ಅನುದಾನ ಒದಗಿಸಿರುವುದಿಲ್ಲ. |

ಸಂಖ್ಯೆ: ಎಂಇಡಿ 521 ಎಂಎಂಸಿ 2022

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ
ಶಿಕ್ಷಣ ಸಚಿವರು



Generated from eOffice by DR.K SUDHAKAR, MED-MIN(SK), MINISTER, MEDICAL EDUCATION SEC on 08/09/2022 05:58 PM